ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ 02 ಇಪಿಎಸ್ 2024

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದೂ. ಸಂ: 080 22200777
E-mail: dte.commissioner@gmail.com

ದಿನಾಂಕ: 22-05-2024.

**ಜ್ಞಾಪನ**

ವಿಷಯ: ಮೇ-2024 ರ ಡಿಪ್ಲೋಮಾ ಸೆಮಿಸ್ಟರ್ ಥಿಯರಿ ಪರೀಕ್ಷೆಗಳ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರುಗಳನ್ನು ನೇಮಿಸುವುದು ಕುರಿತಂತೆ.

ಉಲ್ಲೇಖ: ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/02/ಇಪಿಎಸ್/2024, ದಿನಾಂಕ: 09.05.2024.

*-*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಜ್ಞಾಪನದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಿಗೆ ಪ್ರಶ್ನೆ ಪತ್ರಿಕೆ ಮುದ್ರಣಕಾರ್ಯದ ವೀಕ್ಷಕರುಗಳನ್ನು ನೇಮಿಸಲಾಗಿತ್ತು. ಮುಂದುವರೆದು, ಖಾಸಗಿ ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳಲ್ಲಿ ಸಿ-20 ಪಠ್ಯಕ್ರಮದ ಪರೀಕ್ಷೆಗಳು ಪ್ರಾರಂಭವಾಗುತ್ತಿದ್ದು, ಸದರಿ ಪರೀಕ್ಷಾ ಕೇಂದ್ರಗಳಿಗೆ ಮುಖ್ಯ ಅಧೀಕ್ಷಕರು/ಮುಖ್ಯ ವೀಕ್ಷಕರು/ಉಪ ಮುಖ್ಯ ಅಧೀಕ್ಷಕರುಗಳನ್ನು ನೇಮಿಸಲಾಗಿದ್ದು, ಸದರಿ ಮಾಹಿತಿಯು ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್‌ನಲ್ಲಿ ಲಭ್ಯವಿರುತ್ತದೆ. ಸದರಿ ಸಿಬ್ಬಂದಿಗಳು ನಿಯೋಜಿಸಲಾಗಿರುವ ಸಂಸ್ಥೆಯಲ್ಲಿ ಕಾರ್ಯವರದಿ ಮಾಡಿಕೊಂಡು ಪರೀಕ್ಷಾ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸೂಚಿಸಲಾಗಿದೆ.

ಮುಂದುವರೆದು, ನಿಯೋಜಿಸಿರುವ ಪರಿವೀಕ್ಷಕರುಗಳು ಪ್ರಶ್ನೆ ಪತ್ರಿಕೆ ಮುದ್ರಣಕಾರ್ಯದ ವೀಕ್ಷಕರ ಕೆಲಸದ ಜೊತೆಗೆ ಸದರಿ ಪರೀಕ್ಷಾ ಕೇಂದ್ರದ Sitting Squad ಆಗಿಯೂ ಕರ್ತವ್ಯ ನಿರ್ವಹಿಸಲು ಈ ಮೂಲಕ ಸೂಚಿಸಲಾಗಿದೆ.

ಕಾರ್ಯದರ್ಶಿ,
ತಾಂತ್ರಿಕ ಪರೀಕ್ಷಾ ಮಂಡಳಿ.

ಇವರಿಗೆ:

ಪ್ರಶ್ನೆ ಪತ್ರಿಕೆ ಮುದ್ರಣಕಾರ್ಯದ ವೀಕ್ಷಕರುಗಳಿಗೆ – ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ (ಸಂಬಂಧಪಟ್ಟ ಪ್ರಿನ್ಸಿಪಾಲರ ಮೂಲಕ)

ಪ್ರತಿ:

1. ಮಾನ್ಯ ನಿರ್ದೇಶಕರ ಆಪ್ತಶಾಖೆ – ಮಾಹಿತಿಗಾಗಿ.
2. ಉಪ ನಿರ್ದೇಶಕರು (ಪರೀಕ್ಷೆ)
3. ಇಬಿಎಲ್ ವಿಭಾಗ – ಮಾಹಿತಿಗಾಗಿ.